## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಎಂ. ನಾಗರಾಜು ಇವರ ಶೂನ್ಯ ವೇಳೆಯ ಪ್ರಶ್ನೆಗೆ ಸರ್ಕಾರದ ಉತ್ತರ

**ವಿಷಯ:**

ದಿನಾಂಕ: 04.03.2025 ರಂದು "ಕಾಮಗಾರಿ ಮುಗಿಸುವ ಸವಾಲು" ಎಂದು ವಿಜಯವಾಣಿ ದಿನಪತ್ರಿಕೆಯಲ್ಲಿ ವರದಿಯಾಗಿರುತ್ತದೆ.

"ಬೆಂಗಳೂರು ಮಹಾನಗರದಲ್ಲಿ ಬಿಬಿಎಂಪಿ ಕೈಗೆತ್ತಿಕೊಂಡಿರುವ ವಿವಿಧ ಕಾಮಗಾರಿಗಳಲ್ಲಿ ಹಲವು ಅಪೂರ್ಣಗೊಂಡಿವೆ. ಮಳೆಗಾಲಕ್ಕೆ ಮುನ್ನ ಪೂರ್ಣಗೊಳಿಸದಿದ್ದಲ್ಲಿ ವರ್ಷಾಂತ್ಯದವರೆಗೂ ಮುಂದುವರಿಯುವ ಸಾಧ್ಯತೆ ಇದೆ. ಜೂನ್ ಮೊದಲ ವಾರ ಮುಂಗಾರು ಮಳೆ ಆರಂಭವಾಗಲಿದ್ದರೂ, ಪೂರ್ಣ ಮುಂಗಾರು ಏಪ್ರಿಲ್ ಅಂತ್ಯದಿಂದಲೇ ಶುರುವಾಗಲಿದೆ. ಅಂದರೆ, ಪಾಲಿಕೆಗೆ ಕಾಮಗಾರಿ ಕೈಗೊಳ್ಳಲು ಇನ್ನು 2 ತಿಂಗಳು ಮಾತ್ರ ಅವಕಾಶ ಸಿಗಲಿದೆ. ಆಮೇಲೆ ಮಳೆಯದ್ದೇ ಕಾರುಬಾರು. ರಾಜಧಾನಿಯಲ್ಲಿ ಅಕ್ಟೋಬರ್‌ವರೆಗೂ ಮಳೆ ಇರುವ ಕಾರಣ ಆ ಅವಧಿಯಲ್ಲಿ ಸಿವಿಲ್ ಕೆಲಸ ಸೇರಿ ಪ್ರಮುಖ ಕಾಮಗಾರಿಗಳನ್ನು ಕೈಗೊಳ್ಳುವುದು ಕಷ್ಟಸಾಧ್ಯ.

ಒಂದೆರಡು ದಿನ ಬಿಡುವು ನೀಡಿದರೂ ಮತ್ತೆ ವರುಣಾರ್ಭಟದಿಂದ ತಪ್ಪಿಸಿಕೊಳ್ಳಲು ಸಾಧ್ಯವಾಗದ ಪರಿಸ್ಥಿತಿ ಕಾಣಬಹುದು. ಇದು ಇತ್ತೀಚಿನ ವರ್ಷಗಳಲ್ಲಿ ಅಧಿಕಾರಿಗಳ ಅನುಭವಕ್ಕೆ ಬಂದಿದ್ದರೂ ಕಾಮಗಾರಿ ಪೂರ್ಣಗೊಳಿಸುವ ಇಚ್ಛಾಶಕ್ತಿ ತೋರುತ್ತಿಲ್ಲ. ಈ ಮಧ್ಯೆ ಆರ್ಥಿಕ ವರ್ಷ ಪೂರ್ಣಗೊಂಡು ಹೊಸ ಸಾಲಿನಲ್ಲಿ ಯೋಜನೆಗಳನ್ನು ರೂಪಿಸಲು ಸಿದ್ಧತೆಗಾಗಿ ಬಜೆಟ್ ತಯಾರಿಸಬೇಕಾಗುತ್ತದೆ. ಈ ನೆಪದಿಂದ ಹಾಲಿ ಕಾಮಗಾರಿಗಳ ಮೇಲೆ ನಿಗಾ ಇರಿಸಲು ಅಧಿಕಾರಿಗಳಿಗೆ ಸಾಧ್ಯವಾಗದು. ಜೊತೆಗೆ ಸೂಕ್ತ ಮೇಲ್ವಿಚಾರಣೆ ಇಲ್ಲದೆ ಕಾರಣ ಕಾಮಗಾರಿಗಳಲ್ಲಿ ಗುಣಮಟ್ಟ ಕಾಯ್ದುಕೊಳ್ಳಲಾಗುತ್ತಿಲ್ಲ. ಈ ಲೋಪವೇ ಕಳಪೆ ಕಾಮಗಾರಿಗೆ ಅವಕಾಶ ನೀಡಿದಂತಿದೆ ಎಂಬ ಆಕ್ಷೇಪ ಕೇಳಿಬಂದಿದೆ" ಎಂದು ದಿನಪತ್ರಿಕೆಯಲ್ಲಿ ಪ್ರಕಟವಾಗಿದ್ದು, ಪ್ರಯುಕ್ತ ಮಳೆಗಾಲಕ್ಕೂ ಮುನ್ನವೇ ಕೈಗೆತ್ತಿಕೊಂಡಿರುವ ಕಾಮಗಾರಿಗಳನ್ನು ಗುಣಮಟ್ಟದೊಂದಿಗೆ ಪೂರ್ಣಗೊಳಿಸುವ ಕುರಿತು ಬಿ.ಬಿ.ಎಂ.ಪಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವ ಬಗ್ಗೆ.

**ಉತ್ತರ:**

ಬಿಬಿಎಂಪಿ ವತಿಯಿಂದ ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಮಳೆಗಾಲ ಪ್ರಾರಂಭವಾಗುವ ಮುನ್ನ ಪೂರ್ಣಗೊಳಿಸುವಂತೆ ಎಲ್ಲಾ ಮುಖ್ಯ ಅಭಿಯಂತರರಿಗೆ ಸೂಚಿಸಲಾಗಿರುತ್ತದೆ. ವೈಟ್ ಟಾಪಿಂಗ್ ಕಾಮಗಾರಿಯಲ್ಲಿ ರಸ್ತೆಗೆ ಕಾಂಕ್ರೀಟ್ ಮಾಡುವ ಮುನ್ನ ಕೊಳವೆಗಳನ್ನು ಅಳವಡಿಸಲು ಹೆಚ್ಚು ಸಮಯ ತಗಲುವುದರಿಂದ ಹಾಗೂ ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿಕೊಂಡು ನಿರ್ವಹಿಸಬೇಕಾಗುತ್ತದೆ. ಇದೆಲ್ಲವನ್ನು ಪೂರ್ವಯೋಜಿತವಾಗಿ ಕ್ರಮವಹಿಸಿ ವೈಟ್ ಟಾಪಿಂಗ್ ಕಾಮಗಾರಿಗಳನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಸೂಚನೆ ನೀಡಲಾಗಿರುತ್ತದೆ. ಕಾಮಗಾರಿಗಳನ್ನು ಗುಣಮಟ್ಟದಿಂದ ಕೈಗೊಳ್ಳಲು ಪಾಲಿಕೆಯ ಗುಣಭರವಸೆ ಶಾಖೆಯನ್ನು ಬಲಪಡಿಲಾಗಿದ್ದು, ಪ್ರಸ್ತುತ ಸಂಚಾರಿ ಪ್ರಯೋಗಾಲಯವನ್ನು ಸಹ ಬಳಕೆ ಮಾಡಿಕೊಳ್ಳಲಾಗುತ್ತಿರುತ್ತದೆ. ಕಾಮಗಾರಿಯ ಸ್ಥಳದಲ್ಲೇ ಗುಣಮಟ್ಟ ಪರಿಶೀಲಿಸಿ ಕಾಮಗಾರಿಗಳಲ್ಲಿ ಯಾವುದೇ ಲೋಪವಾಗದಂತೆ ಕೈಗೊಳ್ಳಲಾಗುತ್ತಿರುತ್ತದೆ.

**ಸಂಖ್ಯೆ: ನಅಇ 169 ಎಂಎನ್‌ವೈ 2025 (ಇ)**

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ